ಯೋಗ್ಯವಾಗಿದ್ದರೆ ಅದನ್ನು ಚರ್ಚೆ ಮಾಡೋಣ. 1958ನೆಯ ಇಸವಿಯಲ್ಲಿ ಕೋರ್ಟ್ ಫೀಸ್ ಅಂಡ್ ಸೂಟ್ ವ್ಯಾಲುಯೇಷನ್ ಆಕ್ಟ್‌ನಲ್ಲಿ 15 ರೂಪಾಯಿ ಇತ್ತು. ಆ 15 ರೂಪಾಯಿ ಇವತ್ತು ಸುಮಾರು 40 ವರ್ಷ ಹತ್ತಿರ ಆಯಿತು, ಈಗ ಪರಿಸ್ಥಿತಿ ಏನಾಗಿದೆ ಎಂದು ತಂದರೆ 15 ರೂಪಾಯಿ ಇದ್ದುದನ್ನು 50 ರೂಪಾಯಿಗೆ ಏರಿಸಿದ್ದೇವೆ. ಕೋರ್ಟ್‌ಗಳಲ್ಲಿ ಆಗುತ್ತಾ ಇರತಕ್ಕ ಕೆಲಸ, ಅದಕ್ಕೆ ಖರ್ಚು ಮಾಡತಕ್ಕ ಹಣ ಮತ್ತು ಆದರಿಂದ ನಮಗೆ ಏನೂ ಆದಾಯ ಬರುತ್ತಾ ಇರತಕ್ಕದ್ದು ಅಲ್ಲ. It is not a revenue earning Department, as all of you know. ಮತ್ತು ನಮಗೆ ಎಕ್ಸಪೆಂಚರ್ ಎಂದು ಹೇಳುತ್ತಿರತಕ್ಕದ್ದು Let me tell you it is mounting year by year. The amount which we have increased is hardly minimum from Rs. 15 to Rs. 50 ಆದ್ದರಿಂದ ನಾನು ತಮ್ಮನ್ನು ಕೇಳುತ್ತಿದ್ದೇನೆ. Give you approval. Ultimately this money will be ploughed back into the judiciary only and not for anything else. I will certainly keep in mind what Mrs . Prameela has said about giving exemption to ladies relating to the proceedings in the Court and the Court fee, I will certainly keep it in view and when time comes I will bring appropriate legislation.

ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕ, 1996

ಪರ್ಯಾಲೋಚನಾ ಪ್ರಸ್ತಾವ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ : "1996ರ ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಉಪಾಧ್ಯಕ್ಷರು : "ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ:

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ :

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಹೆಸರು ಮತ್ತು ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಹೆಸರು ಮತ್ತು ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವ ಅಂಗೀಕಾರ

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 1996 ರ ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯನಿಗದಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ:

"1996ರ ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗಧಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(2) ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ 1996 ಪರ್ಯಾರೋಚನಾ ಪ್ರಸ್ತಾವ

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 1996ರ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತ್ತು.

ಶ್ರೀ ಎಂ. ಸಿ .ನಾಣಯ್ಯ : ಮಾನ್ಯ ಉಪಾಧ್ಯಕ್ಷರೆ, ಇದು ನ್ಯಾಯವಾದಿಗಳ ಒಂದು ಕಲ್ಯಾಣ ನಿಧಿ. ನಮ್ಮ ಕರ್ನಾಟಕ ಬಾರ್ ಕೌನ್ಸಿಲನಲ್ಲಿರತಕ್ಕಂತಹ ಅಧ್ಯಕ್ಷರು ಮತ್ತು ಆಡಳಿತ ಮಂಡಲಿಯ ಸದಸ್ಯರ ಜೊತೆಯಲ್ಲಿ ನಾನು ಚರ್ಚೆ ಮಾಡಿದಾಗ ಇದಕ್ಕೆ ಕೆಲವು ತಿದ್ದುಪಡಿಗಳನ್ನು ತರಬೇಕೆಂದೇ ಅವರೇ ಸಲಹೆ ಮಾಡಿದರು. ಆ ತಿದ್ದುಪಡಿಗಳಲ್ಲಿ ಪ್ರಾಮುಖ್ಯವಾಗಿರತಕ್ಕದ್ದು ಯಾವುದು ಎಂದರೆ ಒಂದು ಈಗ ಇರತಕ್ಕ ಸದಸ್ಯತ್ವ ಶುಲ್ಕವನ್ನು ಹೆಚ್ಚಿಸಬೇಕೆಂದು ಎಂದು ಹೇಳುತ್ತಿರತಕ್ಕದ್ದು. 100 ರೂಪಾಯಿಯಿಂದ ಒಂದು ಸಾವಿರ ರೂಪಾಯಿಯವರೆಗೆ. ಅದನ್ನು ಅವರೇ ಸೂಚಿಸಿರತಕ್ಕದ್ದು, ನಾವಲ್ಲ. ಕಡೆಗೆ ಈಗ ಕೊಡುತ್ತಿರತಕ್ಕ 50 ಸಾವಿರ ರೂಪಾಯಿ, ಎಲ್ಲಾದರೂ ಯಾವುದಾದರೂ